Akashvani : Bangalore
Regional Bulletin In Kannada
21.12.2025 / 2.30 pm

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
21.12.2025 / 2.30 pm

<><*<><>*><>

ಮುಖ್ಯಾಂಶಗಳು

೧. ಪೊಲಿಯೋ ಮುಕ್ತ ಭಾರತ ಕೇಂದ್ರ ಸರ್ಕಾರದ ಬದ್ಧತೆ - ಕೇಂದ್ರ ಹಣಕಾಸು ಸಚಿವೆ ನಿರ್ಮಲ ಸೀತಾರಾಮನ್

೨. ರಾಜ್ಯದ ವಿವಿಧೆಡೆ ೨ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ರೈಲ್ವೆ ವಿದ್ಯುದ್ಧೀಕರಣ ವ್ಯವಸ್ಥೆ ಆಧುನೀಕರಣ - ಕೇಂದ್ರ ಸಚಿವ ವಿ ಸೋಮಣ್ಣ

೩. ರಾಜ್ಯಾದ್ಯಂತ ರಾಷ್ಟ್ರೀಯ ಪಲ್ಸ್ ಪೊಲಿಯೋ ಲಸಿಕಾ ಅಭಿಯಾನ - ಗೃಹ ಕಚೇರಿ ಕೃಷ್ಣಾದಲ್ಲಿ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ಧರಾಮಯ್ಯ

೪. ಇಂದು ಸಂಜೆ ಮಂಡ್ಯದ ಮಳವಳ್ಳಿಯಲ್ಲಿ ಶಿವರಾತ್ರೀಶ್ವರ ಶಿವಯೋಗಿಗಳ ೧೦೬೬ನೇ ಜಯಂತೋತ್ಸವದ ಸಮಾರೋಪ ಸಮಾರಂಭ

*****************

ಹೊಸಪೇಟೆ ಸಮೀಪದ ಕಮಲಾಪುರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಇಂದು ಬೆಳಿಗ್ಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ ನೀಡಿದರು. ಮಕ್ಕಳ ಆರೋಗ್ಯವನ್ನು ಕಾಪಾಡುವ ಮತ್ತು ಪೋಲಿಯೊ ಮುಕ್ತ ಭಾರತವನ್ನು ಖಾತ್ರಿಪಡಿಸುವ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸುವ ಮೂಲಕ, ಅವರು, ಐದು ವರ್ಷದೊಳಗಿನ ಮಕ್ಕಳಿಗೆ ಮೌಖಿಕ ಪೋಲಿಯೊ ಲಸಿಕೆ ಹನಿಗಳನ್ನು ನೀಡಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಜಯನಗರದಲ್ಲಿ ಬಜೆಟ್ ಪೂರ್ವ ಚರ್ಚೆ ನಡೆಸುವುದರ ಮೂಲಕ ವಿಕಸಿತ ಭಾರತ ೨೦೪೭ ರ ಕನಸಿಗೆ ಸ್ಫೂರ್ತಿ ತುಂಬಿಕೊಂಡು ಹೋಗುತ್ತಿದ್ದೇನೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್

ಹರ್ಷ ವ್ಯಕ್ತಪಡಿಸಿದ್ದಾರೆ. ವಿಜಯನಗರ ಸಾಮ್ರಾಜ್ಯದಲ್ಲಿ ಜನ ಹೇಗೆ ಸಂಪತ್‌ಭರಿತರಾಗಿ ಬದುಕುತ್ತಿದ್ದರೋ ಹಾಗೆ ಪ್ರಧಾನಿ ನರೇಂದ್ರ ಮೋದಿ ಅವರ ಕನಸು ಕೂಡ ಜನರು ಸೌಖ್ಯದಿಂದ ಜೀವಿಸುವುದಾಗಿದೆ. ಈ ಹಿನ್ನೆಲೆಯಲ್ಲಿ ಎರಡು ದಿನಗಳ ಕಾಲ ಬಜೆಟ್ ಪೂರ್ವ ಹಣಕಾಸು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿರುವುದು ಸಂತಸ ತಂದಿದೆ ಎಂದರು.

ಧ್ವನಿ : ನಿರ್ಮಲಾ ಸೀತಾರಾಮನ್, ಹಣಕಾಸು ಸಚಿವೆ

ಬಳಿಕ ಅವರು ವಿಜಯಾಪುರದ ಹಸರೀಕರಣಕ್ಕಾಗಿ ಹುಣಸೆ ಸಸಿಯನ್ನು ನೆಟ್ಟರು. ಕಾರ್ಯಕ್ರಮದಲ್ಲಿ ಕಾರ್ಪೊರೇಟ್ ವ್ಯವಹಾರಗಳು ಮತ್ತು ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ರಾಜ್ಯ ಸಚಿವ ಹರ್ಷ ಮಲ್ಹೋತ್ರಾ ಉಪಸ್ಥಿತರಿದ್ದರು.

*****************

ಸುಮಾರು ೯ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ರಾಜ್ಯದ ವಿವಿದೆಡೆ ರೈಲ್ವೇ ವಿದ್ಯುದ್ದೀಕರಣವನ್ನು ಆಧುನೀಕರಿಸಲಾಗುತ್ತಿದೆ ಎಂದು ಕೇಂದ್ರ ರೈಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಇಂದು ತಿಳಿಸಿದ್ದಾರೆ. ಕೋಲಾರ ಜಿಲ್ಲೆಯ ಟೇಕಲ್ ರೈಲ್ವೆ ನಿಲ್ದಾಣದಲ್ಲಿ ಲೆವೆಲ್ ಕ್ರಾಸಿಂಗ್ ಬದಲಿಗೆ ನಿರ್ಮಿಸಲಾದ ರೈಲ್ವೆ ಮೇಲ್ಸೇತುವೆಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ರಾಜ್ಯಕ್ಕೆ ಕೋಲಾರ, ಬೆಂಗಳೂರು, ರಾಮನಗರ ಹಾಗೂ ತುಮಕೂರು ಹೃದಯಭಾಗ ಇದ್ದಹಾಗೆ. ಈ ಭಾಗದ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಒತ್ತು ನೀಡುತ್ತಿದೆ ಎಂದು ಹೇಳಿದರು. ರೈಲ್ವೇ ಡಿ.ಆರ್ ಎಂ ಒ ಅವರೊಂದಿಗೆ ಚರ್ಚಿಸಿ ಅಗತ್ಯವಿರುವ ಕಡೆ ಮೆಲ್ಸೇತುವೆ ಮತ್ತು ಕೆಳಸೇತುವೆಗಳನ್ನು ಆದ್ಯತೆ ಮೇರೆಗೆ ಮಾಡಲಾಗುತ್ತಿದೆ. ೧೫ರಿಂದ ೩೦ವರ್ಷದ ಹಳೆಯದಾದ ಅನೇಕ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಈ ಯೋಜನೆಗಳನ್ನು ೨೦೨೮-೨೭ ರ ಒಳಗೆ ಪೂರ್ಣಗೊಳಿಸಲಾಗುವುದು ಎಂದು ಅವರು ತಿಳಿಸಿದರು. ಕೋಲಾರದಿಂದ ಬೆಂಗಳೂರಿಗೆ ನೇರ ರೈಲ್ವೇ ಮಾರ್ಗ ನಿರ್ಮಿಸಲು ಅಧಿಕಾರಿಗಳಿಗೆ ಸ್ಥಳ ಪರಿಶೀಲನೆಗೆ ಸೂಚಿಸಲಾಗಿದೆ. ಟೇಕಲ್ ರೈಲು ನಿಲ್ದಾಣದ ಹತ್ತಿರದ ಲೆವೆಲ್ ಕ್ರಾಸಿಂಗ್ ಗೇಟ್ ಹೆಚ್ಚು ವಾಹನ ದಟ್ಟಣೆಯಿಂದ ಕೂಡಿದ ಲೆವೆಲ್ ಕ್ರಾಸಿಂಗ್ ಗೇಟ್ ಆಗಿದ್ದು, ಹೆಚ್ಚುತ್ತಿರುವ ವಾಹನ ದಟ್ಟಣೆಯ

ಸಮಸ್ಯೆಯನ್ನು ಪರಿಹರಿಸಲು ಮತ್ತು ಸಂಚಾರದ ಸುರಕ್ಷತೆಯನ್ನು ಹೆಚ್ಚಿಸಲು ಇಲ್ಲಿ ಲೆವೆಲ್ ಕ್ರಾಸಿಂಗ್ ಗೇಟ್‌ಗೆ ಬದಲಾಗಿ ರಸ್ತೆ ಮೇಲ್ಸೇತುವೆ ನಿರ್ಮಿಸಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು. ಈ ರಸ್ತೆ ಮೇಲ್ಸೇತುವೆಯನ್ನು ರೈಲ್ವೆ ಸಚಿವಾಲಯ ಮತ್ತು ರಾಜ್ಯ ಸರ್ಕಾರಗಳ ೫೦:೫೦ ವೆಚ್ಚಹಂಚಿಕೆಯ ಆಧಾರದಲ್ಲಿ ೨೩.೫ ಕೋಟಿ ರೂಪಾಯಿಗಳ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಈ ರಸ್ತೆ ಮೇಲ್ಸೇತುವೆ ನಿರ್ಮಾಣದಿಂದ ಸುಗಮ ಮತ್ತು ತಡೆರಹಿತ ರಸ್ತೆ ಸಂಚಾರಕ್ಕೆ ಅನುಕೂಲವಾಗುತ್ತದೆ.

ಧ್ವನಿ - ವಿ.ಸೋಮಣ್ಣ

*****************

ಯುವಸಮೂಹ ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣ, ಶೇಕಡಾ ೩೦ರಷ್ಟು ಮಾದಕ ವ್ಯಸನಿಗಳಾಗುತ್ತಿದ್ದಾರೆ. ಇಂಥವರನ್ನು ಸರಿ ದಾರಿಗೆ ತರುವ ಕೆಲಸ ಮಾಡಬೇಕು ಎಂದು ಅರಣ್ಯ, ಪರಿಸರ ಮತ್ತು ಸೂಕ್ಷ್ಮ ಜೀವಿಶಾಸ್ತ್ರ ಸಚಿವ ಈಶ್ವರ ಖಂಡ್ರೆ ಹೇಳಿದರು. ಮಂಡ್ಯ ಜಿಲ್ಲೆಯ ಮಳವಳ್ಳಿಯಲ್ಲಿ ನಡೆಯುತ್ತಿರುವ ಆದಿಜಗದ್ಗುರು ಶಿವರಾತ್ರಿ ಶಿವಯೋಗಿಶ್ರೀಗಳ ೧೦೬೬ನೇ ಜಂತೋತ್ಸವದ ಐದನೇ ದಿನದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು. ಬಳಿಕ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಬಸವಣ್ಣ ಅವರ ಸಮಸಮಾಜ ನಿರ್ಮಾಣವಾಗಬೇಕಾದರೆ ವೀರಶೈವ ಲಿಂಗಾಯತ ಸಮಾಜದ ಎಲ್ಲಾ ಒಳಪಂಗಡಗಳು ದ್ವೇಷ ಮರೆತು ಒಗ್ಗೂಡಿ ಒಗ್ಗಟ್ಟಾಗಿರಬೇಕು. ಆ ಮೂಲಕ ರಾಜ್ಯದ ಅಭಿವೃದ್ಧಿಗೆ ಶ್ರಮಿಸಬೇಕು. ವೀರಶೈವ ಸಮುದಾಯದಲ್ಲಿ ಒಡಕು ಮೂಡಿಸುವ ಕೆಲಸ ಆಗುತ್ತಿದೆ ಎಂದು ತಿಳಿಸಿದರು. ಇಂದು ಭಾರತ ಬಲಿಷ್ಠ ರಾಷ್ಟ್ರವಾಗಿ ಬಲವರ್ಧನೆಯಾಗಿದೆ. ಪ್ರಧಾನಿ ನರೇಂದ್ರ ಮೋದಿ ಜಗತ್ತಿನ ಯಾವ ದೇಶಕ್ಕೆ ಹೋದರು ಬಸವಣ್ಣರನ್ನು ನೆನಪಿಸಿಕೊಂಡು ಸಮಸಮಾಜ ಕಟ್ಟಿದ ಬಸವಣ್ಣರ ತತ್ವವನ್ನು ಮೆಲುಕು ಹಾಕುತ್ತಾರೆ ಎಂದು ಅವರು ಹೇಳಿದರು.

*****************

ರಾಷ್ಟ್ರೀಯ ಪಲ್ಸ್ ಪೊಲಿಯೋ ಲಸಿಕಾ ದಿನವಾದ ಇಂದು ರಾಜ್ಯಾದ್ಯಂತ ೫ ವರ್ಷದೊಳಗಿನ ಮಕ್ಕಳಿಗೆ ಪೊಲಿಯೋ ಹನಿ ನೀಡುವ ಕಾರ್ಯಕ್ರಮಗಳನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯುತ್

ಹಾಗೂ ಕುಟುಂಬ ಕಲ್ಯಾಣ ಇಲಾಖೆಗಳ ವತಿಯಿಂದ ಹಮ್ಮಿಕೊಳ್ಳಲಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗೃಹ ಕಚೇರಿ ಕೃಷ್ಣಾದಲ್ಲಿ "ರಾಷ್ಟ್ರೀಯ ಲಸಿಕಾ ದಿನ"ವನ್ನು ಮಕ್ಕಳಿಗೆ ಪಲ್ಸ್ ಪೊಲೀಯೊ ಲಸಿಕೆ ಹಾಕುವ ಮೂಲಕ ಉದ್ಘಾಟಿಸಿದರು. ಸಚಿವರಾದ ದಿನೇಶ್ ಗುಂಡೂರಾವ್, ಜಿ.ಪರಮೇಶ್ವರ್ ಸೇರಿಜದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಮೈಸೂರಿನ ಜಯಲಕ್ಷ್ಮಿ ಪುರಂನ ವಿ.ವಿ. ಹೆರಿಗೆ ಆಸ್ಪತ್ರೆಯಲ್ಲಿ ಆಯೋಜಿಸಲಾಗಿದ್ದ ೨೦೨೫ರ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮವನ್ನು ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ. ಹರೀಶ್ ಗೌಡ ಅವರು ಮಕ್ಕಳಿಗೆ ಪೋಲಿಯೋ ಹಾಕುವುದರ ಮೂಲಕ  ಚಾಲನೆ ನೀಡಿದರು. ಸುಮಾರು ೧ ಸಾವಿರದ ೬೦೦ಕ್ಕೂ ಅಧಿಕ ಬೂತುಗಳಲ್ಲಿ ಲಸಿಕೆ ನೀಡಲಾಗುತ್ತಿದೆ. ೪ ಸಾವಿರಕ್ಕೂ ಅಧಿಕ ಸಿಬ್ಬಂದಿ ವರ್ಗದವರು ವೈದ್ಯರು ಮತ್ತು ತಾಲೂಕು ವೈದ್ಯಾಧಿಕಾರಿಗಳು ಒಳಗೊಂಡ ತಂಡಗಳು ಲಸಿಕಾ ಕಾರ್ಯಕ್ರಮದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಕುಮಾರಸ್ವಾಮಿ ಪಿ ಸಿ ಅವರು ಹೇಳಿದರು.  ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಚಿವ ಕೆ.ಹೆಚ್ ಮುನಿಯಪ್ಪ, ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಹನಿ ಹಾಕಿಸುವ ಮೂಲಕ ಪೋಲಿಯೋ ಮುಕ್ತ ರಾಷ್ಟ್ರ ಎಂದು ಮತ್ತೊಮ್ಮೆ ಸಾಬೀತು ಮಾಡೋಣ. ಜಿಲ್ಲೆಯ ೯೯ ಸಾವಿರದ ೮೨೮ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಗುರಿ ಹೊಂದಲಾಗಿದೆ ಎಂದು ಹೇಳಿದರು. ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಗದಗ ನಗರದ ಡಿ ಎಂ ಎಂ ಆಸ್ಪತ್ರೆಯಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾಮಟ್ಟದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನಕ್ಕೆ ವಿಧಾನ ಪರಿಷತ್ ಸದಸ್ಯ ಎಸ್ ವಿ ಸಂಕನೂರ ಚಾಲನೆ ನೀಡಿದರು. ಬಳ್ಳಾರಿ ಜಿಲ್ಲೆಯ ಪಲ್ಸ್ ಪೊಲೀಯೋ ಲಸಿಕೆ ಕಾರ್ಯಕ್ರಮಕ್ಕೆ ಇಂದು ಬಳ್ಳಾರಿಯ ಜಿಲ್ಲಾ ಆಸ್ಪತ್ರೆಯಲ್ಲಿ ಮೇಯರ್ ಪಿ.ಗಾದೆಪ್ಪ ಚಾಲನೆ ನೀಡಿದರು. ಲಿಡ್ಕರ್ ಅಧ್ಯಕ್ಷ  ಮುಂಡ್ರಿಗಿ ನಾಗರಾಜ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.  ಈ ವೇಳೆ ಡಿ.ಹೆಚ್ ಓ. ಡಾ.ಯಲ್ಲಾ ರಮೇಶ್ ಬಾಬು ಜಿಲ್ಲೆಯಲ್ಲಿ ಐದು ವರ್ಷದೊಳಗಿನ ಒಂದು ಲಕ್ಷದ ೮೯ ಸಾವಿರದ ೭೪೫ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.  ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದ ಸಾರ್ವಜನಿಕ ಆಸ್ಪತ್ರೆ ಸಭಾಂಗಣದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ನಿಮಿತ್ಯ ಮಗುವಿಗೆ ಪೋಲಿಯೋ

ಹನಿ ಹಾಕುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶಾಸಕ ರಮೇಶ್ ಬಾಬು ಬಂಡಿ ಸಿದ್ದೇಗೌಡ, ಪೋಲಿಯೋ ಮುಕ್ತ ವಿಶ್ವ ನಿರ್ಮಾಣಕ್ಕಾಗಿ ಕಡ್ಡಾಯವಾಗಿ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸಬೇಕೆಂದು ಹೇಳಿದರು. ಹುಬ್ಬಳ್ಳಿಯ ಎಸ್.ಎಸ್.ಕೃಷ್ಣ ನಗರದಲ್ಲಿರುವ ನಮ್ಮ ಕ್ಲಿನಿಕ್‌ನಲ್ಲಿ ನಡೆದ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಪ್ರಸಾದ ಅಬ್ಬಯ್ಯ ಹಾಗೂ ಪಾಲಿಕೆ ಸದಸ್ಯೆ ಫಾಮೀದಾ ಕಾರಡಗಿ ಅವರು ಚಾಲನೆ ನೀಡಿದರು. ಜಿಲ್ಲೆಯ ೨ ಲಕ್ಷಕ್ಕೂ ಅಧಿಕ ಮಕ್ಕಳಿಗೆ ಪೋಲಿಯೋ ಹನಿ ಹಾಕಲಾಗುತ್ತದೆ. ಸುಮಾರು ೮೯೧ ಬೂತ್‌ಗಳನ್ನು ತೆರೆಯಲಾಗಿದ್ದು, ೩೬೦೦ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಎಂ.ಹೊನಕೇರಿ ಹೇಳಿದ್ದಾರೆ.

*****************

ಮಂಡ್ಯ ಜಿಲ್ಲೆಯ ಮಳವಳ್ಳಿಯಲ್ಲಿ ನಡೆಯುತ್ತಿರುವ ಆದಿ ಜಗದ್ಗುರು ಶಿವರಾತ್ರೀಶ್ವರ ಶಿವಯೋಗಿಗಳ ೧೦೬೬ನೇ ಜಯಂತೋತ್ಸವದ ಸಮಾರೋಪ ಸಮಾರಂಭ ಇಂದು ಸಂಜೆ ನಡೆಯಲಿದೆ.ಸಮಾರೋಪ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಭಾಗವಹಿಸಲಿದ್ದಾರೆ. ಕಳೆದ ಮಂಗಳವಾರ ಆರಂಭವಾದ ಜಯಂತೋತ್ಸವಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ ನೀಡಿ, ಆರು ದಿನಗಳ ಕಾಲ ನಡೆದ ಜಯಂತೋತ್ಸವ ಇಂದು ಮುಕ್ತಾಯಗೊಳ್ಳಲಿದೆ.

*****************

ವಸತಿ ನಿಲಯದ ಎಲ್ಲಾ ಬಾಲಕಿಯರಿಗೆ ಶೀಘ್ರ 'ಶುಚಿ' ಸೌಲಭ್ಯ ಒದಗಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಅಧಿಕಾರಿಗಳಿಗೆ ಸೂಚಿಸಿದರು. ಯಾದಗಿರಿ ಜಿಲ್ಲೆಯ ಗುರುಮಠಕಲ್ ಪಟ್ಟಣದಲ್ಲಿ ಇತ್ತೀಚೆಗೆ ಕಲುಷಿತ ನೀರು, ಆಹಾರ ಸೇವನೆಯಿಂದ ವಿದ್ಯಾರ್ಥಿಗಳು ಅಸ್ವಸ್ಥಗೊಂಡಿದ್ದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಡಿ.ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

*****************